Received on 01/09/2020
WUP.

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/308/ಸುತ್ತೋಲೆ/2018-19/ಸೇವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:20.08.2020

ಸುತ್ತೋಲೆ

ವಿಷಯ: 2017ನೇ ಸಾಲಿನಲ್ಲಿ ನೇಮಕಾತಿ ಹೊಂದಿರುವ ಸಹಾಯಕ ಪ್ರಾಧ್ಯಾಪಕರುಗಳ ಪರೀಕ್ಷಾರ್ಥ ಸೇವಾವಧಿ ಘೋಷಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮ ಸಂಖ್ಯೆಯ ಸುತ್ತೋಲೆಯ ದಿನಾಂಕ:20.04.2019

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಎಲ್ಲಾ ಕಾಲೇಜು ಶಿಕ್ಷಣ ಇಲಾಖಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಮತ್ತು ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೂ ಈ ಮೂಲಕ ತಿಳಿಸುವುದೇನೆಂದರೆ, 2017ನೇ ಸಾಲಿನಲ್ಲಿ ನೇಮಕಾತಿ ಹೊಂದಿರುವ ಸಹಾಯಕ ಪ್ರಾಧ್ಯಾಪಕರುಗಳ ಪರೀಕ್ಷಾರ್ಥ ಸೇವಾವಧಿ ಘೋಷಿಸುವ ಸಂಬಂಧ ನಿಯಮಾನುಸಾರ ದಾಖಲಾತಿಗಳನ್ನು ಪರಿಶೀಲಿಸಿ ಕಳುಹಿಸಿಕೊಡುವಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಪ್ರಸ್ತುತ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ಇನ್ನು ಪ್ರಸ್ತಾವನೆಗಳು ಸ್ವೀಕೃತಿಗೊಂಡಿರುವುದಿಲ್ಲವಾದ್ದರಿಂದ, ಬಾಕಿ ಇರುವ ಸಹಾಯಕ ಪ್ರಾಧ್ಯಾಪಕರುಗಳ ಪ್ರಸ್ತಾವನೆಯನ್ನು ಕೂಡಲೇ ಅಗತ್ಯ ದಾಖಲಾತಿಗಳೊಂದಿಗೆ ದ್ವಿಪ್ರತಿಯಲ್ಲಿ ಮೂಲ ಸೇವಾಪುಸ್ತಕದೊಂದಿಗೆ ಪರಿಶೀಲಿಸಿ ತಮ್ಮ ದೃಢೀಕರಣ ಹಾಗೂ ಶಿಫಾರಸ್ಸಿನೊಂದಿಗೆ ಕಳುಹಿಸಿ ಕೊಡಲು ಸೂಚಿಸಲಾಗಿದೆ. ಒಂದು ವೇಳೆ ಪ್ರಸ್ತಾವನೆಗಳನ್ನು ಕಳುಹಿಸಿಕೊಡಲು ವಿಳಂಬವಾದಲ್ಲಿ ತಮ್ಮನೇ ನೇರಹೊಣೆಗಾರರನ್ನಾಗಿ ಮಾಡಲಾಗುವುದು.

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ:-

1. ಜಂಟಿ ನಿರ್ದೇಶಕರ ಕಛೇರಿ, ಬೆಂಗಳೂರು/ಮಂಗಳೂರು/ಧಾರವಾಡ/ಗುಲ್ಬರ್ಗಾ/ಮೈಸೂರು/ ಶಿವಮೊಗ್ಗ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು,ಮಾಹಿತಿ ತಂತ್ರಜ್ಞಾನ ವಿಭಾಗ ಕೇಂದ್ರ ಕಛೇರಿ - ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4. ಹೆಚ್ಚಿನ ಪ್ರತಿ.
5. ಕಛೇರಿ ಪ್ರತಿ.